CC. 138/15
PW- 3

Govt. of Karnataka **ಅನುಬಂಧ-ಎ** [C.R.P. 67

Deposition Sheets
(R.P. No. 57)
Form No. 4
(Criminal)

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ ಸಿರಾ

**ಸಿ.ಸಿ. ಸಂಖ್ಯೆ: 138/15**

ದಿನಾಂಕಃ **16-11-2022** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| ಚಾಸಾ -7 | ಪ್ರಾಸಾ. -3 |
|---|---|
| ಹೆಸರು | ರಂಗನಾಥ ಎಸ್ ಪಿ |
| ತಂದೆಯ/ಗಂಡನ ಹೆಸರು | ಬಿನ್ ಪುಟ್ಟರಂಗಪ್ಪ |
| ವಯಸ್ಸು | 57 ವರ್ಷ |
| ಉದ್ಯೋಗ | ಪಿ ಎಸ್ ಐ , ಜಿಲ್ಲಾ ವಿಶೇಷ ಶಾಖೆ, ತುಮಕೂರು |
| ವಾಸ | ತುಮಕೂರು |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನಾನು 2011 ರಿಂದ 2016 ರವರೆಗೆ ಕಳ್ಳಂಬೆಳ್ಳ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 24-11-2014 ರಂದು ಸಂಜೆ 4-45 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ.1 ರವರು ಪಂಚನಾಮೆ , ಮಾಲು, ಆರೋಪಿತರು ಮತ್ತು ವರದಿಯೊಂದಿಗೆ ನೀಡಿದ ನಿವೇದನೆಯನ್ನು ಪಡೆದು ಠಾಣಾ ಮೊ. 228/14 ಸಂಖ್ಯೆ ರಲ್ಲಿ ಪ್ರಕರಣವನ್ನು ದಾಖಲು ಮಾಡಿಕೊಂಡು ಪ್ರ.ವ.ವ. ನ್ನು ಮೇಲಧಿಕಾರಿಗಳಿಗೆ ಮತ್ತು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ದೂರನ್ನು ಈಗಾಗಲೇ ನಿ.ಪಿ.2 ಎಂದು ಗುರುತಿಸಲಾಗಿದ್ದು , ಸಾಕ್ಷಿಯ ಸಹಿಯನ್ನು ನಿ.ಪಿ. 2(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವ. ನ್ನು ನಿ.ಪಿ. 4 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ.4(ಎ) ಎಂದು ಗುರುತಿಸಲಾಯಿತು.

ಚಾಸಾ.1 ರವರು ಹಾಜರುಪಡಿಸಿದ ಮಾಲನ್ನು ಠಾಣಾ ಮಾಲುಪಟ್ಟಿ ಸಂಖ್ಯೆ 110/14 ರಲ್ಲಿ ನಮೂದಿಸಿ ನ್ಯಾಯಾಲಯದ ಅನುಮತಿ ಪಡೆದಿರುತ್ತೇನೆ . ಮಾಲುಪಟ್ಟಿಯನ್ನು ನಿ.ಪಿ.5 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.5 ಎ ಎಂದು ಗುರುತಿಸಲಾಯಿತು. ನಂತರ ಆರೋಪಿತರ ವಿರುದ್ಧ ದಸ್ತಗಿರಿ ಕ್ರಮ ಕೈಗೊಂಡು, ಅವರನ್ನು ಸೂಕ್ತ ಬೆಂಗಾವಲಿನೊಂದಿಗೆ ನ್ಯಾಯಲಯಕ್ಕೆ ಹಾಜರುಪಡಿಸಿರುತ್ತೇನೆ.

ತಾಃ 25-11-2014 ಚಾಸಾ.2 ಮತ್ತು 3 ರವರನ್ನು ವಿಚಾಸಿ ಅವರ ಹೇಳಿಕೆ ಪಡೆದಿರುತ್ತೇನೆ. ಸಾಕ್ಷಿಯು ನಿ.ಪಿ.3 ರ ಹೇಳಿಕೆಯಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿ.ಪಿ.3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ಚಾಸಾ.3 ರವರ ಹೇಳಿಕೆಯನ್ನು ನೋಡಿ ಗುರುತಿಸಿದ್ದು , ಸದರಿ ಹೇಳಿಕೆಯನ್ನು ನಿ.ಪಿ.6 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.6(ಎ) ಎಂದು ಗುರುತಿಸಲಾಯಿತು. ನಂತರ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.8 ರವರಿಗೆ ಹಸ್ತಾಂತರಿಸಿರುತ್ತೇನೆ. ನನ್ನ ಮುಂದೆ ಹಾಜರುಪಡಿಸಿದ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿಯ ಈ ದಿನ ಗೈರುಹಾಜರಾಗಿದ್ದು , ಅವರ ಗುರುತಿಸುವಿಕೆಯ ಬಗ್ಗೆ ತಕರಾರು ಇರುವುದಿಲ್ಲವೆಂದು ಹೇಳಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮು.ಮಾ.1 ರಿಂದ 4 ಗಳನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ-** ಆರೋಪಿ ಪರ ಶ್ರೀ ಹೆಚ್.ಬಿ.ವಿ. ವಕೀಲರಿಂದಃ-

ನನ್ನ ಮುಂದೆ ಚಾಸಾ.1 ರವರು ನನ್ನ ಮುಂದೆ ಪಂಚನಾಮೆ, ಮಾಲು , ಆರೋಪಿಯೊಂದಿಗೆ ಹಾಜರಾಗಿ ನಿವೇದನೆಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ.1 ರವರು ಸೃಷ್ಟಿಸಿ ನೀಡಿದ ದೂರನ್ನು ಸ್ವೀಕರಿಸಿ, ಠಾಣಾ ಅಂಕಿ ಅಂಶಗಳಿಗಾಗಿ ಪ್ರಕರಣವನ್ನು ದಾಖಲು ಮಾಡಿಕೊಂಡಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ.1 ರವರ ಮಾತು ಕೇಳಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ.1 ರಿಂದ 4 ಕ್ಕೂ ಈ ಪ್ರಕರಣಕ್ಕೂ ಆರೋಪಿತರಿಗೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ.

**ಮರುವಿಚಾರಣೆಃ-** ಇಲ್ಲಾ .

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಶಿರಾ.